**<u>ದಿನಾಂಕಃ 24-04-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿಪರ ಶ್ರೀ ಬಿ ವಿ ಎನ್ ವಕೀಲರಿಂದಃ</u>**

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಸದರಿ ಸಾಕ್ಷಿಯನ್ನು ಪಿ.ಡಬ್ಲ್ಯೂ-1 ಎಂದು ಪರಿಗಣಿಸಲಾಯಿತು.**

ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ವೆ ನಂ.68/2, ಸರ್ವೆ ನಂ.450, ಸರ್ವೆ ನಂ.241, ನೇದ್ದವುಗಳಿಗೆ ಸಂಬಂಧಿಸಿದ ಗಣಕೀಕೃತ ಪಹಣಿಗಳನ್ನು ನಿಪಿ-1 ರಿಂದ 3 ಎಂದು, ಮುಟೇಷನ ನಂ.131, 122 ಮತ್ತು 406 ನೇದ್ದವುಗಳ ದೃಡೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ರಿಂದ 6 ಎಂದು, ಖಾಸರ ಪಹಣಿಯ ದೃಡೀಕೃತ ಪ್ರತಿಯನ್ನು ನಿಪಿ-7 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮುಂದುವರೆದ ಮುಖ್ಯವಿಚಾರಣೆಗೆ ಸಮಯವಕಾಶ ಕೊರೀದ್ದು, ಸಮಯವಕಾಶ ನೀಡಲಾಯಿತು)**

**<u>(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)</u>**

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.